ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಅಕ್ರಮ-ಸಕ್ರಮ ಜಮೀನಿನ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1141 (1404) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಅಕ್ರಮ-ಸಕ್ರಮ ಯೋಜನೆಯಡಿಯಲ್ಲಿ ನಿಯಮಗಳನ್ನು ಪಾಲಿಸದೇ 12.24 ಎಕರೆ ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗೆ ಮಂಜೂರು ಮಾಡಿರುವ ವಿಚಾರ ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದÀ ಗಮನಕ್ಕೆ ಬಂದಿದೆಯೇ ;

(ಆ) ಅಕ್ರಮ-ಸಕ್ರಮ ನಿಯಮದಡಿಯಲ್ಲಿ ಜಮೀನು ಮಂಜೂರು ಮಾಡಲು ಇರುವ ನಿಯಮಗಳೇನು ; (ವಿವರ ನೀಡುವುದು)

(ಇ) ಈ ನಿಯಮಗಳಡಿಯಲ್ಲಿ ಜಮೀನು ಮಂಜೂರು ಮಾಡಲು ಯಾರಿಗೆ ಅಧಿಕಾರವಿದೆ ;

(ಈ) ಬಗರ್ ಹುಕುಂ ಸಾಗುವಳಿ ಸಕ್ರಮಕ್ಕಾಗಿ ರಚಿಸಿದ ಸಮಿತಿ ತೆಗೆದುಕೊಂಡ ಠರಾವುಗಳಾವುವು ;

(ಉ) ಈ ರೀತಿಯ ಅಕ್ರಮಗಳನ್ನು ಎಸಗಿದವರ ಮೇಲೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?